ಜನನ, ಮರಣಗಳ ಮುಖ್ಯ ನೋಂದಣಾಧಿಕಾರಿಗಳ ಕಛೇರಿ,
ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ,
ಕರ್ನಾಟಕ ರಾಜ್ಯ.
Office of the Chief Registrar of Births and Deaths,
Directorate of Economics & Statistics,
Karnataka State.

ಕರ್ನಾಟಕ ಸರ್ಕಾರ

ದೂರವಾಣಿ: 22869741
e-mail: crbdkar@gmail.com
jdcnldes@gmail.com
Website : http://des.karnataka.gov.in
7ನೇ ಮಹಡಿ, ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಡಾ. ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು-560001,
7th Floor, Vishveshwrayya main tower,
Dr.B.R.Ambedkar Veedhi.
Bangalore-560001.

ಸಂಖ್ಯೆ: ಆಸಾನಿ 11 ಜಮನೋ 2024 ದಿನಾಂಕ:24.06.2024

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ಜನನ, ಮರಣ ಉಪನೋಂದಣಾಧಿಕಾರಿಗಳಾಗಿ ಕಾರ್ಯ ನಿರ್ವಹಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ: IFS 316 SMM 90, ದಿನಾಂಕ: 15.03.1993.
2. ಸರ್ಕಾರದ ಆದೇಶ ಸಂಖ್ಯೆ: ಪಿ.ಡಿ.ಎಸ್ 02 ಎಸ್.ಎಸ್.ಎಂ 2022, ದಿನಾಂಕ: 07.07.2023.
3. ಸರ್ಕಾರದ ಆದೇಶ ಸಂಖ್ಯೆ:ಪಿಡಿಎಸ್ 02 ಎಸ್ ಎಸ್ ಎಂ 2022 ದಿನಾಂಕ:07.03.2024.
4. ಸರ್ಕಾರದ ಸುತ್ತೋಲೆ ಸಂಖ್ಯೆ: ಸಂ: ಆಸಾನಿ 11 ಜಮನೋ 2024, ದಿ.14.03.2024

****

ದೇಶಾದ್ಯಂತ ಜನನ, ಮರಣ ನೋಂದಣಿ ಅಧಿನಿಯಮ, 1969 ಜಾರಿಯಲ್ಲಿರುತ್ತದೆ. ಕರ್ನಾಟಕ ಜನನ, ಮರಣಗಳ ನೋಂದಣಿ ನಿಯಮಗಳು, 1999ರ ಮೂಲಕ ಪುನರ್ ರಚಿತ ನಾಗರಿಕ ನೋಂದಣಿ ಪದ್ಧತಿಯನ್ನು ದಿನಾಂಕ: 01-01-2000 ರಿಂದ ರಾಜ್ಯಾದ್ಯಂತ ಏಕೀಕರಿಸಿ ಜನನ, ಮರಣ ನೋಂದಣಿಯನ್ನು ಕಡ್ಡಾಯವಾಗಿ ಜಾರಿಗೊಳಿಸಲಾಗಿದೆ.

ಸರ್ಕಾರದ ಉಲ್ಲೇಖಿತ (1)ರ ಅಧಿಸೂಚನೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಲೆಕ್ಕಿಗರನ್ನು ಜನನ, ಮರಣ ನೋಂದಣಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿರುತ್ತದೆ. ಗ್ರಾಮೀಣ ಪ್ರದೇಶದಲ್ಲಿ ನಾಗರಿಕ ನೋಂದಣಿ ಪದ್ಧತಿಯನ್ನು ಬಲಪಡಿಸಲು ಹಾಗೂ ಘಟಿಸುವ ಶೇ.100 ರಷ್ಟು ಜನನ, ಮರಣ ನೋಂದಣಿ ಘಟನೆಗಳನ್ನು ದಾಖಲಿಸಲು ಜನನ, ಮರಣ ನೋಂದಣಿ ಅಧಿನಿಯಮ 1969ರ ಪ್ರಕರಣ 7(5) ರನ್ವಯ ಜನನ, ಮರಣ ಘಟನೆಗಳು ಘಟಿಸಿದ ಮೂವತ್ತು ದಿನಗಳವರೆಗಿನ ಘಟನೆಗಳನ್ನು ನೋಂದಾಯಿಸಲು ಪಂಚಾಯಿತಿ ಕಾರ್ಯದರ್ಶಿಗಳನ್ನು ಜನನ, ಮರಣ ಉಪ ನೋಂದಣಾಧಿಕಾರಿಗಳನ್ನಾಗಿ ಹಾಗೂ ಪ್ರಕರಣ 7(1) ರನ್ವಯ ಜನನ, ಮರಣ ಘಟನೆಗಳು ಸಂಭವಿಸಿದ ಮೂವತ್ತು ದಿನಗಳ ನಂತರದ ವಿಳಂಬ ನೋಂದಣಿಯನ್ನು ನೋಂದಾಯಿಸಲು ಗ್ರಾಮ ಆಡಳಿತ ಅಧಿಕಾರಿಗಳನ್ನು ಜನನ, ಮರಣ ನೋಂದಣಾಧಿಕಾರಿಗಳನ್ನಾಗಿ ಉಲ್ಲೇಖಿತ (3) ರಲ್ಲಿ ಸರ್ಕಾರದ ಆದೇಶವನ್ನು ಹೊರಡಿಸಲಾಗಿದೆ.

ಸದರಿ ಆದೇಶದನ್ವಯ ಜನನ, ಮರಣ ನೋಂದಣಿಗೆ ಸಂಬಂಧಿಸಿದಂತೆ, ನೋಂದಣಾಧಿಕಾರಿಗಳು ಮತ್ತು ಉಪ ನೋಂದಣಾಧಿಕಾರಿಗಳ ಪಾತ್ರ, ಜವಾಬ್ದಾರಿ ಹಾಗೂ ನಿರ್ವಹಿಸಬೇಕಾದ ಕಾರ್ಯಗಳ ಕುರಿತ ಮಾರ್ಗಸೂಚಿಯನ್ನು ಒಳಗೊಂಡ ಪ್ರಮಾಣಿತ ಕಾರ್ಯಚರಣೆಯ ವಿಧಾನಗಳನ್ನು ಉಲ್ಲೇಖ(4) ರಲ್ಲಿ ಹೊರಡಿಸಲಾಗಿರುತ್ತದೆ.

**ದಿನಾಂಕ. 01.07.2024** ರಿಂದ ಜಾರಿಗೆ ಬರುವಂತೆ ಉಲ್ಲೇಖ (3)ರ ಸರ್ಕಾರದ ಆದೇಶವನ್ನು ಗ್ರಾಮೀಣ ಪ್ರದೇಶಕ್ಕೆ ಅನ್ವಯವಾಗುವಂತೆ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಕೆಳಕಂಡ ಅಂಶಗಳನ್ನು ಪಾಲಿಸಲು ತಿಳಿಸಿದೆ.

1. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಘಟಿಸುವ ಜನನ, ಮರಣ ಘಟನೆಗಳು ಸಂಭವಿಸಿದ 30 ದಿನಗಳೊಳಗೆ ಜನನ, ಮರಣ ಉಪ ನೋಂದಣಾಧಿಕಾರಿಗಳಾದ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ನಿಯಮಾನುಸಾರ ನೋಂದಣಿ ಮಾಡತಕ್ಕದ್ದು.
   a. ಘಟನೆ ಸಂಭವಿಸಿದ 21 ದಿನಗಳೊಳಗೆ ಜನನ, ಮರಣ ಘಟನೆಗಳನ್ನು ನೋಂದಣಿ ಮಾಡಿ ಉಚಿತವಾಗಿ ಒಂದು ಪ್ರಮಾಣ ಪತ್ರವನ್ನು ವಿತರಿಸುವುದು.
   b. ಕರ್ನಾಟಕ ಜನನ, ಮರಣ ನೋಂದಣಿ ನಿಯಮ 5ರಲ್ಲಿ ನಿಗದಿಪಡಿಸಿದ 21 ದಿನಗಳ ತರುವಾಯ ಮತ್ತು 30 ದಿನಗಳೊಳಗಾಗಿ ವರದಿಯಾಗುವ ಘಟನೆಗಳನ್ನು ಕರ್ನಾಟಕ ಜನನ, ಮರಣ ನೋಂದಣಿ ನಿಯಮಗಳು 1999ರ 9(1) ರ ಪ್ರಕಾರ ರೂ.2/- ತಡೆ ಶುಲ್ಕ ಪಡೆದು ನೋಂದಾಯಿಸುವುದು.
   c. ಘಟನೆ ಸಂಭವಿಸಿದ 30 ದಿನಗಳ ತರುವಾಯ ವರದಿಯಾಗುವ ಘಟನೆಗಳ ನೋಂದಣಿಯನ್ನು ಮಾಡತಕ್ಕದ್ದಲ್ಲ. ಸದರಿ ಘಟನೆಗಳ ನೋಂದಣಿಗೆ ಸಂಬಂಧಿಸಿದಂತೆ ಅಗತ್ಯ ದಾಖಲೆಗಳೊಂದಿಗೆ ಗ್ರಾಮ ಆಡಳಿತ ಅಧಿಕಾರಿಗಳನ್ನು ಸಂಪರ್ಕಿಸಬೇಕಾಗಿರುವ ಹಿನ್ನಲೆಯಲ್ಲಿ ಈ ಕುರಿತಂತೆ ಸಾರ್ವಜನಿಕರಿಗೆ/ ಅರ್ಜಿದಾರರಿಗೆ ಮಾಹಿತಿಯನ್ನು ನೀಡುವುದು.
2. ಜನನ, ಮರಣ ಘಟನೆ ಸಂಭವಿಸಿದ 30 ದಿನಗಳ ನಂತರ ವರದಿಯಾಗುವ ಘಟನೆಗಳನ್ನು ಜನನ, ಮರಣ ನೋಂದಣಾಧಿಕಾರಿಗಳಾದ ಗ್ರಾಮ ಆಡಳಿತ ಅಧಿಕಾರಿಗಳು ನಿಯಮಾನುಸಾರ ಈ ಕೆಳಕಂಡಂತೆ ನೋಂದಣಿ ಮಾಡತಕ್ಕದ್ದು.
   a. ಕರ್ನಾಟಕ ಜನನ, ಮರಣ ನೋಂದಣಿ ನಿಯಮಗಳು 1999ರ ನಿಯಮ 9(2) ರ ಪ್ರಕಾರ 30 ದಿನಗಳ ತರುವಾಯ ಒಂದು ವರ್ಷದ ಒಳಗೆ ವರದಿಯಾಗುವ ಜನನ,ಮರಣ ಹಾಗೂ ನಿರ್ಜೀವ ಜನನಗಳನ್ನು ತಹಶೀಲ್ದಾರರ ಲಿಖಿತ ಅನುಮತಿಯೊಂದಿಗೆ ರೂ.5/- ತಡೆ ಶುಲ್ಕ ಪಡೆದು ನೋಂದಾಯಿಸುವುದು
   b. ಕರ್ನಾಟಕ ಜನನ, ಮರಣ ನೋಂದಣಿ ನಿಯಮಗಳು 1999ರ ನಿಯಮ 9(3) ರ ಪ್ರಕಾರ ಒಂದು ವರ್ಷದ ನಂತರ ವರದಿಯಾಗುವ ಜನನ, ಮರಣ ಘಟನೆಗಳಿಗೆ ವಿಳಂಬ ನೋಂದಣಿ ಮಾಡಲು ಮೊದಲನೇ ವರ್ಗದ ದಂಡಾಧಿಕಾರಿ ಅಥವಾ ಮಹಾ ಪ್ರಾಂತ ದಂಡಾಧಿಕಾರಿ (Presidency Magistrate) ರವರ ಆದೇಶದೊಂದಿಗೆ ರೂ.10/- ತಡೆ ಶುಲ್ಕ ಪಡೆದು ನೋಂದಾಯಿಸುವುದು.

ಜನನ, ಮರಣ ನೋಂದಣಿ ಸಂಬಂಧ ಯಾವುದಾದರೂ ಸಂದೇಹ/ಸ್ಪಷ್ಟೀಕರಣ ಅವಶ್ಯಕತೆ ಇದ್ದಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಛೇರಿ ಹಾಗೂ ಜನನ, ಮರಣಗಳ ಮುಖ್ಯ ನೋಂದಣಾಧಿಕಾರಿಗಳ ಕಛೇರಿಯನ್ನು ಸಂಪರ್ಕಿಸುವುದು.

ಜನನ, ಮರಣ ಮತ್ತು ನಿರ್ಜೀವ ಜನನಗಳ ನೋಂದಣಿ ಮಾಡುವ ಸಂದರ್ಭದಲ್ಲಿ ಇ-ಜನ್ಮ ತಂತ್ರಾಂಶದಲ್ಲಿ ತಾಂತ್ರಿಕ ಸಮಸ್ಯೆಗಳು ಕಂಡು ಬಂದಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಛೇರಿ ಅಥವಾ ಇ-ಜನ್ಮ ಸಹಾಯವಾಣಿ ಹಾಗೂ ಇ-ಮೇಲ್ crbdkar@gmail.com / ejanmahelpdesk@gmail.com ಮತ್ತು ದೂರವಾಣಿ **1800-425-6578** ಕ್ಕೆ ಸಂಪರ್ಕಿಸುವುದು.

ಜನನ, ಮರಣ ನೋಂದಣಿ ಸಂಬಂಧ ಭಾರತದ ಮಹಾ ನೋಂದಣಾಧಿಕಾರಿಗಳು / ರಾಜ್ಯದ ಜನನ, ಮರಣಗಳ ಮುಖ್ಯ ನೋಂದಣಾಧಿಕಾರಿಗಳು ಕಾಲಕಾಲಕ್ಕೆ ಹೊರಡಿಸುವ ಸುತ್ತೋಲೆ / ಆದೇಶ / ಮಾರ್ಗಸೂಚಿಗಳನ್ವಯ ಕಾರ್ಯನಿರ್ವಹಿಸುವುದು.

ಜನನ ಮರಣಗಳ ಮುಖ್ಯ ನೋಂದಣಾಧಿಕಾರಿಗಳು
ಹಾಗೂ ಅಪರ ನಿರ್ದೇಶಕರು

**ಇವರಿಗೆ,**

1. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಜನನ, ಮರಣಗಳ ನೋಂದಣಾಧಿಕಾರಿಗಳು.
2. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಜಿಲ್ಲೆಯ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ಹಾಗೂ ಅಪರ ಜಿಲ್ಲಾ ಜನನ, ಮರಣಗಳ ನೋಂದಣಾಧಿಕಾರಿಗಳು.
4. ಹಿರಿಯ ತಾಂತ್ರಿಕ ನಿರ್ದೇಶಕರು, ಎನ್‌ಐಸಿ, ವಿ.ವಿ.ಚಿಕ್ಕಗೋಪುರ, ಬೆಂಗಳೂರು.
5. ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರಿಗೆ (ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಮೂಲಕ).
6. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ (ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಮೂಲಕ).
7. ಎಲ್ಲಾ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ (ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
8. ಎಲ್ಲಾ ಗ್ರಾಮ ಆಡಳಿತ ಅಧಿಕಾರಿಗಳು ಹಾಗೂ ಜನನ, ಮರಣಗಳ ನೋಂದಣಾಧಿಕಾರಿಗಳು (ತಹಶೀಲ್ದಾರರಗಳ ಮೂಲಕ).
9. ಎಲ್ಲಾ ಗ್ರಾಮ ಪಂಚಾಯಿತಿಯ ಕಾರ್ಯದರ್ಶಿಗಳು ಹಾಗೂ ಜನನ, ಮರಣಗಳ ಉಪ ನೋಂದಣಾಧಿಕಾರಿಗಳಿಗೆ (ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).

**ಪ್ರತಿಯನ್ನುಮಾಹಿತಿಗಾಗಿ ಸಲ್ಲಿಸಲಾಗಿದೆ:**

1. ಮಾನ್ಯ ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು ರವರಿಗೆ (ಆಪ್ತ ಕಾರ್ಯದರ್ಶಿಗಳ ಮೂಲಕ)
2. ಮಾನ್ಯ ಕಂದಾಯ ಸಚಿವರು, ವಿಧಾನಸೌಧ, ಬೆಂಗಳೂರು ರವರಿಗೆ (ಆಪ್ತ ಕಾರ್ಯದರ್ಶಿಗಳ ಮೂಲಕ)
3. ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು, ವಿಕಾಸಸೌಧ, ಬೆಂಗಳೂರು ರವರಿಗೆ (ಆಪ್ತ ಕಾರ್ಯದರ್ಶಿಗಳ ಮೂಲಕ)
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ಸಚಿವರು, ವಿಧಾನಸೌಧ, ಬೆಂಗಳೂರು ರವರಿಗೆ (ಆಪ್ತ ಕಾರ್ಯದರ್ಶಿಗಳ ಮೂಲಕ)
5. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ, ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು ರವರಿಗೆ (ಆಪ್ತ ಕಾರ್ಯದರ್ಶಿಗಳ ಮೂಲಕ)

7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು ರವರಿಗೆ (ಆಪ್ತ ಕಾರ್ಯದರ್ಶಿಗಳ ಮೂಲಕ)
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಸರ್ಕಾರದ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
14. ಆಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
15. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
16. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
17. ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
18. ನಿರ್ದೇಶಕರು (ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
19. ಜನನ, ಮರಣಗಳ ಮುಖ್ಯ ನೋಂದಣಾಧಿಕಾರಿಗಳು ಹಾಗೂ ಅಪರ ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
20. ವಿಶೇಷ ಅಧಿಕಾರಿ (ಜಿ.ಪಂ.), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
21. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
22. ಜಂಟಿ ನಿರ್ದೇಶಕರು (ಸಾಂಖ್ಯಿಕ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
23. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.